## ಕರ್ನಾಟಕವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 898

ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರತಾಪ ಸಿಂಹ ನಾಯಕ್.ಕೆ (ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 14-03-2025

ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಅನೇಕ ವರ್ಷಗಳಿಂದ "ರಾಣೆಯಾರ್" ಸಮುದಾಯವು ಪರಿಶಿಷ್ಟ ಜಾತಿ ಮೀಸಲಾತಿ ನಿಯಮದಡಿ ಸೌಲಭ್ಯಗಳನ್ನು ಪಡೆದುಕೊಂಡಿದ್ದು, ಕಳೆದ 3-4 ವರ್ಷಗಳಿಂದ "ಅಂಬೇಡ್ಕರ್ ಅಭಿವೃದ್ಧಿ ನಿಗಮ" ದಲ್ಲಿ "ರಾಣೆಯಾರ್" ಸಮುದಾಯ ದಾಖಲಾಗಿದ್ದನ್ನು ತೆಗೆದು ಹಾಕಲಾಗಿರುವುದರಿಂದ ಈ ಸಮುದಾಯಕ್ಕೆ ಯಾವುದೇ ನಿಗಮದಿಂದಲೂ ಸೌಲಭ್ಯಗಳು ದೊರೆಯದೆ ಸಮುದಾಯ ಅತ್ಯಂತ ಸಂಕಷ್ಟಕ್ಕೀಡಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; | ರಾಣೆಯಾರ್ ಸಮುದಾಯವು ಪರಿಶಿಷ್ಟ ಜಾತಿ ಪಟ್ಟಿಯ ಕ್ರ.ಸಂ.(92)ರಲ್ಲಿ ನಮೂದಿಸಲಾಗಿರುತ್ತದೆ. ಸದರಿ ಸಮುದಾಯವನ್ನು ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ ಸೌಲಭ್ಯವನ್ನು ಪಡೆಯಲು ನಿಗಮದ ವ್ಯಾಪ್ತಿಯಲ್ಲಿ ಸೇರಿಸಲಾಗಿದೆ. ಅದರಂತೆ, 2024-25ನೇ ಸಾಲಿಗೆ ಸದರಿ ರಾಣೆಯಾರ್ ಸಮುದಾಯದವರು ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಿಂದ ಸಾಲ/ಸಹಾಯಧನ ಸೌಲಭ್ಯ ಪಡೆಯುಲು ಸೇವಾಸಿಂಧು ಪೋರ್ಟಲ್ ನಲ್ಲಿ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಸದರಿ ಸಮುದಾಯದ ಫಲಾನುಭವಿಗಳು ನಿಗಮದಲ್ಲಿನ ಯೋಜನೆಗಳಿಗೆ ಅರ್ಜಿಗಳನ್ನು ಸಲ್ಲಿಸಿ ಸಾಲ/ಸಹಾಯಧನ ಸೌಲಭ್ಯವನ್ನು ಪಡೆಯಬಹುದಾಗಿರುತ್ತದೆ. |
| ಆ) | ಬಂದಿದಲ್ಲಿ, ಕೂಲಿ ಕಾರ್ಮಿಕರಾಗಿ ದುಡಿದು, ಅತ್ಯಂತ ಬಡತನದಲ್ಲಿಯೇ ಜೀವನ ಸಾಗಿಸುತ್ತಿರುವ "ರಾಣೆಯಾರ್" ಸಮುದಾಯವನ್ನು ಪರಿಶಿಷ್ಟ ಜಾತಿ/ ಪಂಗಡದ ಹೆಚ್ಚು ಸೌಲಭ್ಯಗಳಿರುವ ಸರ್ಕಾರದ ನಿಗಮದಲ್ಲಿ ಮರು ಸೇರ್ಪಡೆಗೊಳಿಸಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ ; | |
| ಇ) | ಯಾವ ಕಾಲಮಿತಿಯೊಳಗೆ "ರಾಣೆಯಾರ್" ಸಮುದಾಯವನ್ನು ಪರಿಶಿಷ್ಟ ಜಾತಿ/ ಪಂಗಡದ ಹೆಚ್ಚು ಸೌಲಭ್ಯಗಳಿರುವ ಸರ್ಕಾರದ ನಿಗಮದಲ್ಲಿ ಮರು ಸೇರ್ಪಡೆಗೊಳಿಸಲಾಗುವುದು? | ಈಗಾಗಲೇ ಸದರಿ ಸಮುದಾಯವನ್ನು ಡಾ.ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿ ಸೇರಿಸಲಾಗಿದೆ. |

ಸಕಇ 240 ಎಸ್‌ಎಲ್‌ಪಿ 2025.

(ಡಾ: ಹೆಚ್.ಸಿ.ಮಹದೇವಪ್ಪ)
ಸಮಾಜ ಕಲ್ಯಾಣ ಸಚಿವರು